ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 21-03-2017

# ಪತ್ರಿಕಾ ಆಮಂತ್ರಣ

1. **ವಿಶ್ವ ಜಲ ದಿನ 2017**

   ಘೋಷವಾಕ್ಯ "ತ್ಯಾಜ್ಯ ನೀರು" & "ನೀರು ಉಳಿಸಿ – ಬೆಂಗಳೂರು ಉಳಿಸಿ" ಜಾಗೃತಿ ಜಾಥಾ ಉದ್ಘಾಟನಾ ಸಮಾರಂಭ.

   ಉದ್ಘಾಟನೆ:

   ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

   ಅಧ್ಯಕ್ಷತೆ:

   ಆರ್. ರೋಷನ್ ಬೇಗ್, ನಗರಾಭಿವೃದ್ಧಿ ಮತ್ತು ಹಜ್ ಸಚಿವರು.

   ದಿನಾಂಕ: 22-03-2017 ಬುಧವಾರ, ಸಮಯ: ಬೆಳಿಗ್ಗೆ 8.30 ಗಂಟೆಗೆ

   ಸ್ಥಳ: ವಿಧಾನಸೌಧ ಮುಂಭಾಗ, ಬೆಂಗಳೂರು.

2. **ಜನಪರ ಬಜೆಟ್ 2017-18**

   ವಸ್ತು ಪ್ರದರ್ಶನ ಉದ್ಘಾಟನಾ ಸಮಾರಂಭ:

   ಉದ್ಘಾಟನೆ:

   ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

   ಘನ ಉಪಸ್ಥಿತಿ

   ಡಿ.ಹೆಚ್. ಶಂಕರಮೂರ್ತಿ, ಸಭಾಪತಿಗಳು, ಕರ್ನಾಟಕ ವಿಧಾನ ಪರಿಷತ್,

ಕೆ.ಬಿ. ಕೋಳಿವಾಡ, ಸಭಾಧ್ಯಕ್ಷರು, ಕರ್ನಾಟಕ ವಿಧಾನ ಸಭೆ.

ದಿನಾಂಕ: 22-03-2017 ಬುಧವಾರ, ಸಮಯ: ಬೆಳಿಗ್ಗೆ 10.30 ಗಂಟೆಗೆ
ಸ್ಥಳ: ಬ್ಯಾಂಕ್ವೆಟ್ ಹಾಲ್ ಅವರಣ, ವಿಧಾನಸೌಧ, ಬೆಂಗಳೂರು.

## ವಿಧಾನ ಪರಿಷತ್ತಿನಲ್ಲಿಂದು:

## ರಾಷ್ಟ್ರೀಯ ಹೆದ್ದಾರಿಗಳಲ್ಲಿ ಪ್ರತಿ 40 ಕಿ.ಮೀ.ಗೊಂದು ಗಸ್ತು ವಾಹನ

ಬೆಂಗಳೂರು, ಮಾರ್ಚ್ 21 (ಕರ್ನಾಟಕ ವಾರ್ತೆ)

ರಾಜ್ಯದಲ್ಲಿರುವ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಪ್ರತಿ ಟೋಲ್ ಕೇಂದ್ರಗಳಿಂದ ಸುಮಾರು 40 ಕಿ.ಮೀ ವ್ಯಾಪ್ತಿಗೆ ಒಂದರಂತೆ ಗಸ್ತು ವಾಹನ, ಅಂಬ್ಯುಲೆನ್ಸ್ ಮತ್ತು ಕ್ರೇನ್ ವಾಹನಗಳ ವ್ಯವಸ್ಥೆ ಮಾಡಲಾಗಿದೆ, ಗಸ್ತು ವಾಹನಗಳಿಗೆ ಜಿ.ಪಿ.ಎಸ್. ಟ್ರ್ಯಾಕಿಂಗ್ ಅಳವಡಿಸಲಾಗುವುದು ಎಂದು ಇಂಧನ ಸಚಿವ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ವಿಧಾನ ಪರಿಷತ್ತಿನ ಕಲಾಪದಲ್ಲಿ ಇಂದು ಬಸವನಗೌಡ ಆರ್. ಪಾಟೀಲ್ ಅವರು ಕೇಳಿದ ಪ್ರಶ್ನೆಗೆ ಲೋಕೋಪಯೋಗಿ ಸಚಿವ ಡಾ. ಎಚ್.ಸಿ. ಮಹದೇವಪ್ಪ ಅವರ ಅನುಪಸ್ಥಿತಿಯಲ್ಲಿ ಇಂಧನ ಸಚಿವ ಡಿ.ಕೆ. ಶಿವಕುಮಾರ್ ಅವರು ಮಾತನಾಡಿ ರಾಷ್ಟ್ರೀಯ ಹೆದ್ದಾರಿಗಳಲ್ಲಿ  ನಡೆಯುವ ಅಪಘಾತಗಳಲ್ಲಿ ಸಾವನ್ನಪ್ಪುವ ಪ್ರಾಣಿಗಳ ಕಳೇಬರವನ್ನು ತೆರವುಗೊಳಿಸಲು ಸಂಬಂಧಪಟ್ಟ ಹೆದ್ದಾರಿ ನಿರ್ವಹಣೆ ಗುತ್ತಿಗೆದಾರರ ಜವಾಬ್ದಾರಿಯಾಗಿದೆ.

ರಾಷ್ಟ್ರೀಯ ಹೆದ್ದಾರಿಗಳಲ್ಲಿ ಅಪಘಾತ ನಿಯಂತ್ರಣಕ್ಕಾಗಿ ಹೈವೇ ಗಸ್ತುವಾಹನಗಳನ್ನು ಹಗಲು-ರಾತ್ರಿ ಕರ್ತವ್ಯಕ್ಕೆ ನೇಮಿಸಲಾಗಿದ್ದು ಹೆಚ್ಚುವರಿಯಾಗಿ ಆಯಾ ಪೊಲೀಸ್ ಕಂಟ್ರೋಲ್ ರೂಂ ವಾಹನಗಳನ್ನು ಸಹ ಗಸ್ತಿಗಾಗಿ ಉಪಯೋಗಿಸಿಕೊಳ್ಳಲಾಗುತ್ತಿದೆ.

ರಾಜ್ಯದಲ್ಲಿ ಹೊಸದಾಗಿ ನಿರ್ಮಾಣವಾಗಿರುವ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಗಸ್ತು ವಾಹನಗಳನ್ನು ಹಾಗೂ ಸಿಬ್ಬಂದಿಗಳನ್ನು ನೇಮಿಸಲು ಸರ್ಕಾರ ಶೀಘ್ರ ಕ್ರಮ ಕೈಗೊಳ್ಳಲಿದೆ ಎಂದು ಹೇಳಿದರು.

ಎಸ್‌ಎಂ:ಜೆಡಿ:ಜೆಪಿಆರ್

# ಪ್ರಸಕ್ತ ಸಾಲಿನಲ್ಲಿ ರಾಜ್ಯದ 4 ಕೃಷಿ ವಿ.ವಿ. ಗಳ ಗರಿಷ್ಠ ನೇಮಕಾತಿ

**ಬೆಂಗಳೂರು, ಮಾರ್ಚ್ 21 (ಕರ್ನಾಟಕ ವಾರ್ತೆ)**

ರಾಜ್ಯದಲ್ಲಿರುವ ಬೆಂಗಳೂರು, ಧಾರವಾಡ, ರಾಯಚೂರು ಹಾಗೂ ಶಿವಮೊಗ್ಗದಲ್ಲಿನ ಕೃಷಿ ವಿಶ್ವ ವಿದ್ಯಾಲಯಗಳಲ್ಲಿ ಹಾಲಿ ಖಾಲಿ ಇರುವ ಹುದ್ದೆಗಳನ್ನು ಪ್ರಸಕ್ತ ಸಾಲಿನಲ್ಲಿ ಗರಿಷ್ಠ ಮಟ್ಟದಲ್ಲಿ ತುಂಬಲು ಸರ್ಕಾರ ಯೋಜನೆ ರೂಪಿಸುತ್ತಿದೆ ಎಂದು ಕೃಷಿ ಸಚಿವ ಕೃಷ್ಣ ಬೈರೇಗೌಡ ಅವರು ಇಂದು ವಿಧಾನ ಪರಿಷತ್ತಿನಲ್ಲಿ ತಿಳಿಸಿದರು.

ಸದಸ್ಯ ಬಸವರಾಜ್ ಹೊರಟ್ಟಿ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು ರಾಜ್ಯದ 4 ಕೃಷಿ ವಿ.ವಿ. ಗಳಲ್ಲಿ ಋತುಕಾಲಿಕ ಕೃಷಿ ಚಟುವಟಿಕೆಗಳಿಗಾಗಿ ಒಟ್ಟು 2256 ಸಿಬ್ಬಂದಿಗಳು ತಾತ್ಕಾಲಿಕವಾಗಿ ಕಾರ್ಯನಿರ್ವಹಿಸುತ್ತಿದ್ದು, ಅದರಲ್ಲಿ  ಬೆಂಗಳೂರು – 472, ಧಾರವಾಡ – 872, ರಾಯಚೂರು – 642 ಹಾಗೂ ಶಿವಮೊಗ್ಗ – 270 ತಾತ್ಕಾಲಿಕ ಸಿಬ್ಬಂದಿಗಳಿದ್ದಾರೆ.

ಋತುಕಾಲಿಕ/ತಾತ್ಕಾಲಿಕ ಸೇವೆಯನ್ನು ಪಡೆದ ಸಿಬ್ಬಂದಿಗಳನ್ನು ಕೃಷಿ ವಿಶ್ವವಿದ್ಯಾನಿಲಯಗಳ ಸೇವೆಯಲ್ಲಿ ವಿಲೀನಗೊಳಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.

ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮದಡಿ 4 ಕೃಷಿ ವಿ.ವಿ. ಗಳಲ್ಲಿ ಸಹ ಒಟ್ಟು 596 ದಿನಗೂಲಿ ನೌಕರರಿಗೆ ಸೇವಾ ಭದ್ರತೆ ಒದಗಿಸಿ ಅಧಿಸೂಚನೆ ಹೊರಡಿಸಲಾಗಿದೆ ಎಂದು ಹೇಳಿದರು.

ಎಸ್‌ಎಂ:ಜೆಡಿ:ಜಿಪಿಆರ್

# ರಾಜ್ಯದಲ್ಲಿ ಮುಂದಿನ ಜೂನ್ ಒಳಗೆ 2500 ಮೆ. ವ್ಯಾಟ್ ಸೌರಶಕ್ತಿ ಉತ್ಪಾದನೆ

**ಬೆಂಗಳೂರು, ಮಾರ್ಚ್ 21 (ಕರ್ನಾಟಕ ವಾರ್ತೆ)**

ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಸೌರಶಕ್ತಿ ವಿದ್ಯುತ್ ಉತ್ಪಾದನೆಗಾಗಿ ಹಮ್ಮಿಕೊಂಡಿರುವ ಯೋಜನೆಗಳ ಮೂಲಕ ಪ್ರಸ್ತುತ 550.5 ಮೆಗಾ ವ್ಯಾಟ್ ಸೌರ ವಿದ್ಯುತ್ ಉತ್ಪಾದನೆಯಾಗುತ್ತಿದ್ದು ಮುಂದಿನ ಜೂನ್ ಒಳಗಾಗಿ 2500 ಮೆ. ವ್ಯಾಟ್ ವಿದ್ಯುತ್‌ನ್ನು ಉತ್ಪಾದಿಸಲಿದ್ದೇವೆ ಎಂದು ಇಂಧನ ಸಚಿವ ಡಿ.ಕೆ. ಶಿವಕುಮಾರ್ ಅವರು ಹೇಳಿದರು.

ರಾಜ್ಯ ಸರ್ಕಾರದ ಸೌರಶಕ್ತಿ ಉತ್ಪಾದನಾ ನೀತಿ 2014–21 ಜಾರಿಗೊಳಿಸಿದ್ದು ನೀತಿಯ ಪ್ರಕಾರ ನಿಗದಿಪಡಿಸಿದ ಈ ಅವಧಿಯಲ್ಲಿ ಕನಿಷ್ಠ 6000 ಮೆ. ವ್ಯಾಟ್ ಸಾಮರ್ಥ್ಯದ ಸ್ಥಾವರಗಳನ್ನು ಸ್ಥಾಪಿಸಲು ಅವಕಾಶ ಕಲ್ಪಿಸಲಾಗಿದ್ದು ಸದರಿ ನೀತಿಯನ್ವಯ ಪ್ರಸ್ತುತ ರಾಜ್ಯದಲ್ಲಿ ವಿವಿಧ ವರ್ಗಗಳಲ್ಲಿ ಒಟ್ಟು 6178 ಮೆ. ವ್ಯಾಟ್ ಸಾಮರ್ಥ್ಯ ಸೋಲಾರ ವಿದ್ಯುತ್ ಘಟಕಗಳನ್ನು ಹಂಚಿಕೆ ಮಾಡಲಾಗಿದೆ.

**ಸೌರಪಾರ್ಕ್:**

ರಾಜ್ಯ ಸರ್ಕಾರವು ಸೌರಶಕ್ತಿ ಅಭಿವೃದ್ಧಿ ನಿಗಮದ ವತಿಯಿಂದ ತುಮಕೂರು ಜಿಲೆಯ ಪಾವಗಡ ತಾಲ್ಲೂಕಿನಲ್ಲಿ 2000 ಮೆ. ವ್ಯಾಟ್ ಸೌರಪಾರ್ಕ್ ಅನ್ನು ನಿರ್ಮಿಸುತ್ತಿದ್ದು, ಇದು ಜಾಗತಿಕವಾಗಿ ಅತ್ಯಂತ ದೊಡ್ಡ ಸೌರಪಾರ್ಕ್ ಎಂಬ ಹಿರಿಮೆಗೆ ಪಾತ್ರವಾಗಿದೆ ಎಂದು ಸಚಿವರು ಹರ್ಷ ವ್ಯಕ್ತಪಡಿಸಿದರು.

ಎಸ್‌ಎಂ:ಜೆಡಿ:ಜಿಪಿಆರ್

ವಿಧಾನಸಭೆಯಲ್ಲಿ ಇಂದು:

## ಅನ್ನಪೂರ್ಣೇಶ್ವರಿ ನಗರಕ್ಕೆ ಪೊಲೀಸ್ ಠಾಣೆ

**ಬೆಂಗಳೂರು, ಮಾರ್ಚ್ 21 (ಕರ್ನಾಟಕ ವಾರ್ತೆ)**

ನಗರದ ಜ್ಞಾನ ಭಾರತಿ ಪೊಲೀಸ್ ಠಾಣೆ ಸರಹದ್ದು ಬಹು ವಿಸ್ತಾರವಾಗಿದ್ದರಿಂದ, ಆಡಳಿತಾತ್ಮಕ ಹಾಗೂ ಸಾರ್ವಜನಿಕ ಹಿತದೃಷ್ಟಿಯಿಂದ, ಜ್ಞಾನ ಭಾರತಿ ಪೊಲೀಸ್ ಠಾಣೆ ಸರಹದ್ದನ್ನು ವಿಂಗಡಿಸಿ ಅನ್ನಪೂರ್ಣೇಶ್ವರಿ ನಗರ ಪೊಲೀಸ್ ಠಾಣೆಯನ್ನು ಹೊಸದಾಗಿ ಸೃಜಿಸಿ, ಅಧಿಸೂಚನೆಯನ್ನು ಹೊರಡಿಸಲಾಗಿದೆ.

ಇಂದು ವಿಧಾನಸಭೆ ಅಧಿವೇಶನದಲ್ಲಿ ಯಶವಂತಪುರ ಶಾಸಕ ಸೋಮಶೇಖರ್ ಎಸ್.ಟಿ. ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಗೃಹ ಸಚಿವ ಡಾ. ಜಿ. ಪರಮೇಶ್ವರ ಅವರು ಸಾರ್ವಜನಿಕರು ಕಡಿಮೆ ಸಮಯದಲ್ಲಿ ಠಾಣೆಯನ್ನು ತಲುಪಲು ಹಾಗೂ ಪೊಲೀಸ್ ಸಿಬ್ಬಂದಿಗಳು ಸದರಿ ಸ್ಥಳಗಳನ್ನು ಸೂಕ್ತ ಸಮಯದಲ್ಲಿ ತಲುಪಲು ಅನುಕೂಲವಾಗುವ ದೃಷ್ಟಿಯಿಂದ ಹತ್ತಿರದ ಪೊಲೀಸ್ ಠಾಣೆಯ ಸರಹದ್ದಿಗೆ ಸೇರಿಸಲಾಗಿರುತ್ತದೆ. ಈ ಬಗ್ಗೆ ಸಂಬಂಧಪಟ್ಟ ಠಾಣಾಧಿಕಾರಿಗಳಿಗೆ ಹಾಗೂ ಸಿಬ್ಬಂದಿರವರುಗಳಿಗೆ ಠಾಣೆಯ ಸರಹದ್ದಿನ ಬಗ್ಗೆ ಮಾಹಿತಿಯನ್ನು ಸಾರ್ವಜನಿಕರ ಗಮನಕ್ಕೆ ತರಲಾಗಿದೆ ಎಂದು ಸಚಿವರು ತಿಳಿಸಿದರು.

ಎಸ್‌ಎಂ:ಪಿಎಸ್‌ಐ:ಜಿಪಿಆರ್

## ವಸತಿ ಗೃಹ ನಿರ್ಮಾಣ

**ಬೆಂಗಳೂರು, ಮಾರ್ಚ್ 21 (ಕರ್ನಾಟಕ ವಾರ್ತೆ)**

ರಾಜ್ಯದ ತುಮಕೂರು ಜಿಲ್ಲೆಯಲ್ಲಿ ಪೊಲೀಸ್ ಗೃಹ ನಿರ್ಮಾಣಕ್ಕೆ 2020 ಯೋಜನೆಯಡಿಯಲ್ಲಿ 24 ಪಿ.ಸಿ. ಮತ್ತು 6 ಎಸ್‌ಐ ವಸತಿ ಗೃಹಗಳನ್ನು ಹಾಗೂ ಹಂತ –3 ರಲ್ಲಿ 120 ಪಿಸಿ ಮತ್ತು 6 ಎಸ್‌ಐ ವಸತಿ ಗೃಹಗಳನ್ನು ನಿರ್ಮಿಸಲಾಗುತ್ತಿದೆ. ಹನ್ನೊಂದು ಸಾವಿರ ಮನೆಗಳನ್ನು 2275 ಕೋಟಿ ರೂ. ಗಳಲ್ಲಿ ಮೂರು ಹಂತಗಳಲ್ಲಿ ನಿರ್ಮಿಸಲು ಯೋಜನೆ ರೂಪಿಸಲಾಗಿದ್ದು, ಮೊದಲ ಹಂತದ ಕಾಮಗಾರಿ ಮುಗಿದಿದ್ದು ಎರಡನೇ ಹಂತದ ಕೆಲಸ ಪ್ರಗತಿಯಲ್ಲಿದ್ದು, ಮೂರನೇ ಹಂತಕ್ಕೆ ಟೆಂಡರ್ ಪ್ರಕಿಯೆ ಪ್ರಾರಂಭವಾಗಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ ಅವರು ತಿಳಿಸಿದರು.

ಅವರು ಇಂದು ವಿಧಾನಸಭೆಯ ಅಧಿವೇಶನದಲ್ಲಿ ತುಮಕೂರು ನಗರದ ಶಾಸಕ ಡಾ.ರಫೀಕ್ ಅಹ್ಮದ್ ಎಸ್. ಅವರು ಕೇಳಿದ ಪ್ರಶ್ನೆಗೆ ಗೃಹ ಸಚಿವರು ಉತ್ತರಿಸಿದರು.

ಎಸ್‌ಎಂ:ಪಿಎಸ್‌ಐ:ಜಿಪಿಆರ್

## ಅವಶ್ಯಕ ಹುದ್ದೆ ಭರ್ತಿಗೆ ಕ್ರಮ

ಬೆಂಗಳೂರು, ಮಾರ್ಚ್ 21 (ಕರ್ನಾಟಕ ವಾರ್ತೆ)

ರಾಜ್ಯ ಗುಪ್ತವಾರ್ತೆ ಘಟಕದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕಾರ್ಯಕಾರಿ ಸಿಬ್ಬಂದಿಗಳ ಬಲ ಒಟ್ಟು 812 ಸಿಬ್ಬಂದಿಗಳು ಹಾಗೂ ಒಟ್ಟು 140 ಲಿಪಿಕ ಸಿಬ್ಬಂದಿಯವರು ಕಾರ್ಯನಿರ್ವಹಿಸುತ್ತಿದ್ದಾರೆ. ಖಾಲಿಯಿರುವ ಹುದ್ದೆಗಳನ್ನು ಭರ್ತಿಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಧಾನಸಭೆಯಲ್ಲಿ ನಡೆದ ಅಧಿವೇಶನದಲ್ಲಿ ತಿಳಿಸಿದರು.

ಅವರು ಇಂದು ವಿಧಾನಸಭೆಯಲ್ಲಿ ಹೆಬ್ಬಾಳ ಶಾಸಕ ನಾರಾಯಣಸ್ವಾಮಿ ವೈ. ಎ. ಅವರ ಪ್ರಶ್ನೆಗೆ ಉತ್ತರಿಸುತ್ತಾ ರಾಜ್ಯ ಗುಪ್ತವಾರ್ತೆ ಘಟಕಕ್ಕೆ ಪ್ರತ್ಯೇಕ ವೃಂದ ಮತ್ತು ನೇಮಕಾತಿ ನಿಯಮದಂತೆ ಹುದ್ದೆಗಳನ್ನು ತುಂಬಲಾಗುವುದು ಮುಖ್ಯಮಂತ್ರಿ ಅವರು ತಿಳಿಸಿದರು.

ಎಸ್‌ಎಂ:ಪಿಎಸ್‌ಐ:ಜಿಪಿಆರ್

## ರಾಜ್ಯದಲ್ಲಿನ ಮದ್ಯದ ಆಮದು – ರಫ್ತು

ಬೆಂಗಳೂರು, ಮಾರ್ಚ್ 21 (ಕರ್ನಾಟಕ ವಾರ್ತೆ)

ಹೊರ ರಾಜ್ಯ ಮತ್ತು ಹೊರ ದೇಶಗಳಿಂದ ಬ್ರಾಂಡಿ, ಜಿನ್, ರಮ್, ವೋಡ್ಕಾ ಹಾಗೂ ವಿಸ್ಕಿ ಮದ್ಯಗಳನ್ನು ಅಮದು ಮಾಡಿಕೊಳ್ಳಲಾಗುತ್ತಿದ್ದು, ಅದೇ ರೀತಿ ಹೊರ ರಾಜ್ಯ ಮತ್ತು ಹೊರ ದೇಶಗಳಿಂದ ಬ್ರಾಂಡಿ, ಜಿನ್, ರಮ್, ವೋಡ್ಕಾ ಹಾಗೂ ವಿಸ್ಕಿ ಮದ್ಯಗಳನ್ನು ರಫ್ತು ಮಾಡಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಇಂದು ವಿಧಾನಸಭೆಯಲ್ಲಿ ಶಾಸಕ ಬಾಲಕೃಷ್ಣ ಸಿ.ಎನ್. (ಶ್ರವಣಬೆಳಗೊಳ) ಅವರು ಕೇಳಿದ ಪ್ರಶ್ನೆಗೆ ಉತ್ತರಿಸುತ್ತಾ ಮುಖ್ಯಮಂತ್ರಿ ಅವರು ರಾಜ್ಯದಲ್ಲಿ 2013–14, 2014–15 ಹಾಗೂ 2015–16 ನೇ ಸಾಲಿನಲ್ಲಿ ಹೊರದೇಶದಿಂದ 2,62,988 (ಪೆಟ್ಟಿಗೆಗಳಲ್ಲಿ) ಹಾಗೂ ಹೊರರಾಜ್ಯದಿಂದ 1,10,97,984 (ಪೆಟ್ಟಿಗೆಗಳಲ್ಲಿ) ಮದ್ಯವನ್ನು ಆಮದು ಮಾಡಿಕೊಳ್ಳಲಾಗಿದೆ.

**ರಾಜ್ಯದಲ್ಲಿ 2013-14, 2014-15 ಹಾಗೂ 2015-16 ನೇ ಸಾಲಿನಲ್ಲಿ 1,83,663 (ಪೆಟ್ಟಿಗೆಗಳಲ್ಲಿ) ಹೊರದೇಶಕ್ಕೆ ಹಾಗೂ 78,16,581 (ಪೆಟ್ಟಿಗೆಗಳಲ್ಲಿ) ಹೊರರಾಜ್ಯಕ್ಕೆ ಮದ್ಯವನ್ನು ರಫ್ತು ಮಾಡಲಾಗಿದೆ ಎಂದು ಮುಖ್ಯಮಂತ್ರಿ ಅವರು ತಿಳಿಸಿದರು.**

**ರಾಜ್ಯದಲ್ಲಿ 2013-14, 2014-15 ಹಾಗೂ 2015-16 ನೇ ಸಾಲಿನಲ್ಲಿ ಹೊರದೇಶದಿಂದ 233.55 ಕೋಟಿ ರೂ. ಗಳ ಹಾಗೂ ಹೊರರಾಜ್ಯದಿಂದ 1,117.66 ಕೋಟಿ ರೂ. ಗಳ ಮದ್ಯವನ್ನು ಆಮದು ಮಾಡಲಾಗಿದೆ.**

**ಅದೇ ರೀತಿ ರಾಜ್ಯದಲ್ಲಿ 2013-14, 2014-15 ಹಾಗೂ 2015-16 ನೇ ಸಾಲಿನಲ್ಲಿ ಹೊರದೇಶದಿಂದ 6.30 ಲಕ್ಷ ರೂ. ಮದ್ಯವನ್ನು ಹಾಗೂ ಹೊರರಾಜ್ಯದಿಂದ 3,616.35 ಲಕ್ಷದ ಮದ್ಯವನ್ನು ರಫ್ತುಮಾಡಲಾಗಿದೆ ಎಂದು ತಿಳಿಸಿದರು.**

**ಎಸ್‌ಎಂ:ಪಿಎಸ್‌ಐ:ಜಿಪಿಆರ್**

# ಅಂಗನವಾಡಿ ಕಾರ್ಯಕರ್ತೆಯರ ವೇತನ ಕೇಂದ್ರ ಮತ್ತು ರಾಜ್ಯ ಸರ್ಕಾರ 60-40 ಹೊಸ ಅನುಪಾತ

**ಬೆಂಗಳೂರು, ಮಾರ್ಚ್ 21 (ಕರ್ನಾಟಕ ವಾರ್ತೆ)**

ವಿಧಾನ ಸಭೆಯಲ್ಲಿಂದು ಕನಿಷ್ಠ ವೇತನ ನಿಗದಿಗಾಗಿ ನಡೆಸುತ್ತಿರುವ ಅಂಗನವಾಡಿ ಕಾರ್ಯಕರ್ತೆಯರ ಮುಷ್ಕರದ ಬಗ್ಗೆ ಪ್ರಸ್ತಾಪಿಸಿ, ಅವರ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿದ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ, ಪ್ರತಿಪಕ್ಷದ ನಾಯಕ ಜಗದೀಶ್ ಶೆಟ್ಟರ್, ಬಿಜೆಪಿ ಶಾಸಕರುಗಳ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಹಿಂದಿನಿಂದಲೂ ಅಂಗನವಾಡಿ ಕಾರ್ಯಕರ್ತೆಯರಿಗೆ ಕೇಂದ್ರ 90 ರಷ್ಟು ಹಾಗೂ ರಾಜ್ಯ ದಿಂದ 10 ರಷ್ಟು ವೇತನವಾಗಿ ಕೊಡಲಾಗುತ್ತಿತ್ತು, ಆದರೆ ಇತ್ತೀಚೆಗೆ ಕೇಂದ್ರ ಸರ್ಕಾರ ಏಕಾಏಕಿ 60-40 ರಂತೆ ನಿಗದಿ ಮಾಡಿದೆ. ಆದರೂ ರಾಜ್ಯಸರ್ಕಾರ ಪ್ರತಿ ವರ್ಷ ಅಂಗನವಾಡಿ ಕಾರ್ಯಕರ್ತೆಯರ ಗೌರವ ಧನವನ್ನು ಹೆಚ್ಚಿಸುತ್ತಲೇ ಬಂದಿದೆ. ಹಾಲಿ ರಾಜ್ಯ ಸರ್ಕಾರದಿಂದ 7000 ರೂ ವರೆಗೆ ವೇತನ ನೀಡಲಾಗುತ್ತಿದೆ. ಆದರೆ ಕೇಂದ್ರ ಸರ್ಕಾರ ಅವರ ವೇತನವನ್ನು ಹೆಚ್ಚಿಸುವ ಬಗ್ಗೆ ಯಾವ ಕ್ರಮವನ್ನು ತೆಗೆದುಕೊಂಡಿಲ್ಲ ಎಂದರು.

## ಅಂಗನವಾಡಿ ಕಾರ್ಯಕರ್ತೆಯರ ನೋವಿಗೆ ಸ್ಪಂದನೆ – ಉಮಾಶ್ರೀ:

ಇದೇವೇಳೆ ಉತ್ತರಿಸಿದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಶ್ರೀಮತಿ ಉಮಾಶ್ರೀ ಅವರು ನೆನ್ನೆ ದಿನ ನಾನು ಖುದ್ದಾಗಿ ಮುಷ್ಕರದ ಸ್ಥಳಕ್ಕೆ ಭೇಟಿ ನೀಡಿ ಮಾತನಾಡಿದ್ದೆ, ಮುಖ್ಯಮಂತ್ರಿಗಳನ್ನು ಭೇಟಿ ಮಾಡಿಸಿ ಚರ್ಚಿಸಲಾಗಿತ್ತು. ಪ್ರತಿ ವರ್ಷ ಸಂಬಳ ಹೆಚ್ಚಿಸುವುದಲ್ಲದೆ ಅವರ ನೋವಿಗೆ ಸ್ಪಂದಿಸುತ್ತಲೇ ಬಂದಿದ್ದೇವೆ. ಅಂಗನವಾಡಿ ಕಾರ್ಯಕರ್ತರು ಸೇವೆಯಲ್ಲಿರುವಾಗ ನಿಧನಹೊಂದಿದರೆ ಅವರ ಮಕ್ಕಳಿಗೆ

ಅನುಕಂಪದ ಆಧಾರದ ಮೇಲೆ ಕೆಲಸ ಕೊಡುವ ಬಗ್ಗೆ ಮನವಿ ಸಲ್ಲಿಸಿದಾಗಿ ಅದನ್ನು ಜಾರಿಗೆ ತಂದಿದ್ದೇವೆ. ಜಿಲ್ಲಾಧಿಕಾರಿಗಳು ಮತ್ತು ಸಿ.ಇ.ಓ ಗಳೊಂದಿಗೆ ಮಾತನಾಡಿ ಅಂಗನವಾಡಿ ಕಾರ್ಯಕರ್ತೆಯರಿಗೆ ಕೆಲಸದ ಒತ್ತಡ ಕಡಿಮೆ ಮಾಡಲು ತಿಳಿಸಿದೆ. ಮರಣ ಪರಿಹಾರವನ್ನು ಸಹಾಯಕಿಯರಿಗೂ ಸೇರಿದಂತೆ 50 ಸಾವಿರ ರೂ.ಗಳಿಗೆ ಹೆಚ್ಚಿಸಲಾಗಿದೆ. ಅಗತ್ಯ ಮೂಲ ಸೌಲಭ್ಯಗಳನ್ನು ಕಲ್ಪಿಸಿಕೊಡಲಾಗಿದೆ. ಸರ್ಕಾರ ಅವರ ನೋವನ್ನು ಅರ್ಥಮಾಡಿಕೊಂಡು ಸ್ಪಂದಿಸುತ್ತಲೇ ಇದೆ ಎಂದರು.

**ಎಸ್‌ಎಂ:ಪಿಎಸ್‌ಐ:ಜಿಪಿಆರ್**

## ವೇತನ ಪರಿಷ್ಕರಣೆ – ಮುಖ್ಯಮಂತ್ರಿ ಭರವಸೆ

**ಬೆಂಗಳೂರು, ಮಾರ್ಚ್ 21 (ಕರ್ನಾಟಕ ವಾರ್ತೆ)**

ರಾಜ್ಯ ಸರ್ಕಾರಿ ಮತ್ತು ಕೇಂದ್ರ ಸರ್ಕಾರಿ ನೌಕರರ ವೇತನದಲ್ಲಿ ವ್ಯತ್ಯಾಸ ಇರುವುದರ ಬಗ್ಗೆ ಸದನದಲ್ಲಿ ಪ್ರಶ್ನಿಸಿದ ನವಲಗುಂದ ಶಾಸಕ ಕೋನರೆಡ್ಡಿ ಎನ್.ಎಚ್. ಅವರಿಗೆ ಉತ್ತರ ನೀಡಿದ ಮುಖ್ಯಮಂತ್ರಿಗಳು ಆಯವ್ಯಯದಲ್ಲಿ ಈಗಾಗಲೇ ಘೋಷಣೆ ಮಾಡಿರುವಂತೆ ಏಪ್ರಿಲ್ ನಲ್ಲಿ ಅಧ್ಯಕ್ಷರು ಹಾಗೂ ಸದಸ್ಯರುಗಳನ್ನು ನೇಮಕ ಮಾಡಿ ಆಯೋಗವನ್ನು ರಚಿಸಿ ವೇತನ ತಾರತಮ್ಯ, ವ್ಯತ್ಯಾಸಗಳನ್ನು ಸರಿಪಡಿಸಿಕೊಡಲಾಗುವುದು ಎಂದರು.

ನಿಯಮಗಳ ರೀತ್ಯ ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಐ.ಎ.ಎಸ್ ಅಧಿಕಾರಿಗಳಿಗೆ ಕೇಂದ್ರದ ನಿಯಮದಂತೆ ರಾಜ್ಯದ ನೌಕರರಿಗೆ ರಾಜ್ಯ ಸರ್ಕಾರದ ನಿಯಮದಂತೆ ವೇತನ ಹಾಗೂ ಕಾಲಕಾಲಕ್ಕೆ ಉಂಟಾಗುವ ಬೆಲೆ ಏರಿಕೆ ಸಂಕಷ್ಟವನ್ನು ಸರಿದೂಗಿಸಲು ವರ್ಷಕ್ಕೆ ಎರಡು ಬಾರಿ ತುಟ್ಟಿ ಭತ್ಯೆ ದರಗಳನ್ನು ಪರಿಷ್ಕರಿಸಲಾಗುತ್ತಿದ್ದು, ನೌಕರರಿಗೆ ಆರ್ಥಿಕ ತೊಂದರೆ ಉಂಟಾಗುವುದಿಲ್ಲ ಎಂದು ಹೇಳಿದರು.

**ಎಸ್‌ಎಂ:ಪಿಎಸ್‌ಐ:ಜಿಪಿಆರ್**

## ಮುಜರಾಯಿಗೆ ಒಳಪಟ್ಟ ದೇವಸ್ಥಾನಗಳಲ್ಲಿ ಪೂಜಾವಿಧಿಗಳಿಗೆ ಸಮರ್ಪಕ ರೀತಿ ಅನುದಾನ ಬಿಡುಗಡೆ

**ಬೆಂಗಳೂರು, ಮಾರ್ಚ್ 21 (ಕರ್ನಾಟಕ ವಾರ್ತೆ)**

ರಾಜ್ಯದ ದೇವಾಲಯಗಳಲ್ಲಿ ರೂಢಿ ಸಂಪ್ರದಾಯ ಬದ್ಧವಾಗಿ ಸಮರ್ಪಕವಾಗಿ ಪೂಜಾವಿಧಿ ನಡೆಯುತ್ತಿದೆ. ಈ ಬಗ್ಗೆ ಯಾವುದೇ ದೂರು ಬಂದಿಲ್ಲ ಎಂದು ಜವಳಿ ಮತ್ತು ಮುಜರಾಯಿ ಸಚಿವ ರುದ್ರಪ್ಪ ಲಮಾಣಿ ಅವರು ವಿಧಾನಸಭೆಯಲ್ಲಿ ಇಂದು ತಿಳಿಸಿದರು.

ರಾಜ್ಯದಲ್ಲಿ ಎಲ್ಲಾ ಮುಜರಾಯಿ ದೇವಸ್ಥಾನಗಳಲ್ಲಿ ಸಮರ್ಪಕವಾಗಿ ಪೂಜಾ ವಿಧಿ ವಿಧಾನಗಳು ನಡೆಯುತ್ತಿದೆಯೇ ? ಜಾತ್ರೆ ಸಮಾರಂಭಗಳಲ್ಲಿ ಬರುವ ಹಣದಲ್ಲಿ ದೇವಸ್ಥಾನಗಳ ನಿರ್ವಹಣೆಗೆ ವೆಚ್ಚಮಾಡುತ್ತಿರುವುದರ ಬಗ್ಗೆ ಶಾಸಕ ಪಿಳ್ಳ ಮುನಿಶಾಮಪ್ಪ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು ಮುಜರಾಯಿ ಇಲಾಖೆಗೆ ಒಳಪಡುವ ವರ್ಗ ಎ ಮತ್ತು ಬಿ ದೇವಾಲಯಗಳಲ್ಲಿ ಕಾಯ್ದೆ ಸೆಕ್ಷನ್ 36 ರನ್ವಯ ಪ್ರತಿ ಆರ್ಥಿಕ ವರ್ಷದಲ್ಲಿ ದೇವಾಲಯದ ಆದಾಯಕ್ಕನುಗುಣವಾಗಿ ನಿರ್ವಹಣೆ ವೆಚ್ಚವನ್ನು ಅನುವು ಮಾಡಿಕೊಡಲಾಗುತ್ತಿದೆ. ಸಿ ವರ್ಗದ ಗ್ರಾಮಾಂತರ ಪ್ರದೇಶದ ಯಾವುದೇ ಆದಾಯವಿಲ್ಲದ ದೇವಾಲಯಗಳಿಗೆ ವಿಶೇಷ ಪ್ರಕರಣಗಳಲ್ಲಿ ಅನುದಾನ ಮಂಜೂರು ಮಾಡಲಾಗುತ್ತಿದೆ. ಕೆಲವು ಸಲ ಸೇವೆಯ ರೂಪದಲ್ಲಿ ಭಕ್ತಾದಿಗಳು, ಗ್ರಾಮಸ್ಥರು ನಡೆಸಿಕೊಡುತ್ತಾರೆ ಎಂದರು.

ಎಸ್‌ಎಂ:ಪಿಎಸ್‌ಐ:ಜಿಪಿಆರ್

**<u>ಪತ್ರಿಕಾ ಪ್ರಕಟಣೆ</u>**

## <u>ಜನಪರ ಬಜೆಟ್ 2017–18</u>
## <u>ವಸ್ತು ಪ್ರದರ್ಶನ ಉದ್ಘಾಟನಾ ಸಮಾರಂಭ</u>

**ಬೆಂಗಳೂರು, ಮಾರ್ಚ್ 21 (ಕರ್ನಾಟಕ ವಾರ್ತೆ)**

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಮಾರ್ಚ್ 21 ರಂದು ಬೆಳಿಗ್ಗೆ 10.30 ಗಂಟೆಗೆ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್ ಆವರಣದಲ್ಲಿ ಜನಪರ ಬಜೆಟ್ 2017–18 – ವಸ್ತು ಪ್ರದರ್ಶನ ಸಮಾರಂಭವನ್ನು ಹಮ್ಮಿಕೊಂಡಿದೆ.**

**ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಸ್ತು ಪ್ರದರ್ಶನದ ಉದ್ಘಾಟನೆಯನ್ನು ನೆರವೇರಿಸಲಿದ್ದಾರೆ. ಈ ಸಂದರ್ಭದಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಡಿ.ಹೆಚ್. ಶಂಕರಮೂರ್ತಿ ಹಾಗಗೂ ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷ ಕೆ.ಬಿ. ಕೋಳಿವಾಡ ಅವರು ಉಪಸ್ಥಿತರಿರುವರು. ನಗರಾಭಿವೃಧಿ ಸಚಿವ ಹಾಗೂ ಶಿವಾಜಿನಗರದ ವಿಧಾನಸಭಾ ಕ್ಷೇತ್ರ ಶಾಸಕ ಆರ್. ರೋಷನ್ ಬೇಗ್, ಕರ್ನಾಟಕ ವಿಧಾನ ಪರಿಷತ್ ನಾಯಕ ಕೆ.ಎಸ್. ಈಶ್ವರಪ್ಪ**

ಹಾಗೂ ಕರ್ನಾಟಕ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಜಗದೀಶ್ ಶೆಟ್ಟರು ಈ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ .

ಎಸ್‌ಎಂ:ಜೆಡಿ:ಜಿಪಿಆರ್

## ವಿದ್ಯಾರ್ಥಿಗಳಿಗೆ ಬೇಸಿಗೆ ಕಾರ್ಯಕ್ರಮ

ಬೆಂಗಳೂರು, ಮಾರ್ಚ್ 21 (ಕರ್ನಾಟಕ ವಾರ್ತೆ)

ಬೆಂಗಳೂರಿನ ಜವಾಹರ್‌ಲಾಲ್ ನೆಹರೂ ತಾರಾಲಯದಲ್ಲಿ ಏಪ್ರಿಲ್ 4 ರಂದು ಬೇಸಿಗೆ ಕಾರ್ಯಕ್ರಮವನ್ನು ವಿಜ್ಞಾನ ವಿದ್ಯಾರ್ಥಿಗಳಿಗಾಗಿ ಹಮ್ಮಿಕೊಂಡಿದೆ. ಈ ತರಬೇತಿಗಾಗಿ ಆಸಕ್ತರು ಮಾರ್ಚ್ 28 ರಿಂದ ನೋಂದಾಯಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ತಾರಾಲಯದ ವೆಬ್‌ಸೈಟ್ www.taralaya.org ನೋಡಬಹುದಾಗಿದೆ ಜವಾಹರ್‌ಲಾಲ್ ನೆಹರು ತಾರಾಲಯದ ದೂರವಾಣಿ ಸಂಖ್ಯೆ 226 6084/2237 9725 ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್

## ಮಾರ್ಚ್ 24 ರಂದು
## ಅರೇಬಿಕ್ ಪರೀಕ್ಷೆ – ಫಲಿತಾಂಶ ಪ್ರಕಟ

ಬೆಂಗಳೂರು, ಮಾರ್ಚ್ 21 (ಕರ್ನಾಟಕ ವಾರ್ತೆ)

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ (ಇತರೆ ಪರೀಕ್ಷೆಗಳು) ವತಿಯಿಂದ ಫೆಬ್ರವರಿಯಲ್ಲಿ ನಡೆದ ಅರೇಬಿಕ ಪರೀಕ್ಷೆಯ ಫಲಿತಾಂಶವನ್ನು ಮಾರ್ಚ್ 24 ರಂದು ಬೆಳಿಗ್ಗೆ 10.00 ಗಂಟೆಗೆ ಪ್ರಕಟಿಸಲಾಗುವುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್

## ARABIC EXAMINATION - RESULT ANNOUNCED

**Bengaluru, March 21 (Karnataka Information)**

**The results of the Arabic examination of February - 2017 conducted by the Karnataka Secondary Education Examination Board, Bengaluru will be announced on 24-03-2017 at 10.00 am in all the Arabic Schools.**

**ಎಸ್‌ಎಂ:ಜೆಡಿ:ಜಿಪಿಆರ್**

## <u>ಅಸಾಧಾರಣ ಸಾಧನೆ ಮಾಡಿದ ಮಕ್ಕಳಿಗೆ ರಾಷ್ಟ್ರ ಪ್ರಶಸ್ತಿ</u>

**ಬೆಂಗಳೂರು, ಮಾರ್ಚ್ 21 (ಕರ್ನಾಟಕ ವಾರ್ತೆ)**

ಕಲೆ, ಸಾಂಸ್ಕೃತಿಕ, ಯಾವುದೇ ಕ್ಷೇತ್ರದಲ್ಲಿ ನಾವೀನ್ಯತೆ, ರಾಷ್ಟ್ರೀಯ ಮಟ್ಟದಲ್ಲಿ ತಾರ್ಕಿಕ ಸಾಧನೆ, ಕ್ರೀಡೆ, ಸಮಾಜ ಸೇವೆ, ಸಂಗೀತ ಮತ್ತು ಕೇಂದ್ರ ಆಯ್ಕೆ ಸಮಿತಿಯ ನಿರ್ಧಾರದ ಪ್ರಕಾರ ಮಾನ್ಯತೆಗೆ ಯೋಗ್ಯವಾದ ಯಾವುದೇ ಕ್ಷೇತ್ರದಲ್ಲಿ ಅತ್ಯುತ್ತಮ ಸಾಧನೆಯನ್ನು ಮಾಡಿರುವಂತಹ ಮಕ್ಕಳಿಗೆ ರಾಷ್ಟ್ರ ಪ್ರಶಸ್ತಿಯನ್ನು ಭಾರತ ಸರ್ಕಾರವು ನೀಡುತ್ತದೆ. ಭಾರತದಲ್ಲಿ ನೆಲೆಸಿರುವ ಮತ್ತು ಮೇಲ್ಕಂಡ ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆಯನ್ನು ಮಾಡಿರುವ 5 ರಿಂದ 18 ವರ್ಷದೊಳಗಿನ ಅಂದರೆ ದಿನಾಂಕ:01.08.1999 ಹಾಗೂ ನಂತರ ಹುಟ್ಟಿದ ಮಕ್ಕಳನ್ನು 2017ನೇ ಸಾಲಿಗೆ ಆಯ್ಕೆ ಮಾಡಲಾಗುವುದು. ಈ ರಾಷ್ಟ್ರ ಮಟ್ಟದ ಪ್ರಶಸ್ತಿಯು ಒಂದು ಚಿನ್ನದ ಪದಕ, ರೂ.20,000/–ಗಳ ನಗದು, ರೂ.10,000/– ಮೌಲ್ಯದ ಪುಸ್ತಕ ವೋಚರ್ ಮತ್ತು ಪ್ರಶಸ್ತಿ ಪತ್ರ ಹಾಗೂ 35 ಬೆಳ್ಳಿ ಪದಕ(ಪ್ರತಿ ರಾಜ್ಯ ಕೇಂದ್ರಾಡಳಿತ ಪ್ರದೇಶಕ್ಕೆ ಒಂದು ಬೆಳ್ಳಿ ಪದಕ) ರೂ. 10,000/– ನಗದು, ರೂ.3,000/– ಗಳ ಮೌಲ್ಯದ ಪುಸ್ತಕ ವೋಚರ್ ಹಾಗೂ ಪ್ರಶಸ್ತಿ ಪತ್ರ ಒಳಗೊಂಡಿರುತ್ತದೆ.

ಈ ಪ್ರಶಸ್ತಿಗೆ ಆಯ್ಕೆಯಾಗುವಂತಹ ಮಕ್ಕಳು ಅಪ್ರತಿಮ ಪ್ರತಿಭೆಯುಳ್ಳವರಾಗಿರತಕ್ಕದ್ದು. ಅಸಾಧಾರಣವೆಂದು ಇವರ ಸಾಧನೆಯನ್ನು ಸಮರ್ಥಿಸಲು ಪೂರಕ ದಾಖಲಾತಿಗಳನ್ನು ಒದಗಿಸುವುದು. ಮಕ್ಕಳ ವಯಸ್ಸಿನ ಪ್ರಮಾಣ ಪತ್ರವನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿ ಸಲ್ಲಿಸಬೇಕು.

2017ನೇ ವರ್ಷದ ಪ್ರಶಸ್ತಿಗೆ ನಿಗದಿಪಡಿಸಿದ ಅರ್ಜಿ ನಮೂನೆಗಳನ್ನು ಸಂಬಂಧಿಸಿದ ಜಿಲ್ಲೆಯ ಉಪ ನಿರ್ದೇಶಕರ ಕಛೇರಿ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಇಲ್ಲಿಂದ ಪಡೆದು, ಆಂಗ್ಲ ಭಾಷೆಯಲ್ಲಿ ದ್ವಿಪ್ರತಿಯಲ್ಲಿ ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ: 30.05.2017 ರ ಒಳಗೆ ತಲುಪುವಂತೆ ಸಂಬಂಧಪಟ್ಟ ಜಿಲ್ಲಾ ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಇವರಿಗೆ ಕಳುಹಿಸತಕ್ಕದ್ದು. ನಿಗದಿತ ದಿನಾಂಕದ ನಂತರ ಸಲ್ಲಿಸಿದ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ.

# National Child Award for Exceptional Achievement

Bengaluru, March 21 (Karnataka Information)

Government of India has instituted an award to give recognition to children with exceptional abilities and who have shown outstanding achievement in fields such as Innovation in any field including design, Scholastic achievement at National level, Art, Culture, Sports, Social service, Music and any other field which deserves recognition as per the decision of the Central Selection Committee. The Children residing in India born on or after 01-08-1999 and who are in the age group of 5 -18 years with the exceptional achievement in the above mentioned fields will be considered for this Award for the year -2017.

The National Award consists of one Gold Medal with cash prize of Rs.20,000/-, book vouchers of Rs.10,000/-, a certificate and a citation and 35 silver Medals (One for each State/UT) with cash prize of Rs.10,000/-, book vouchers of Rs.3,000/-, a certificate and a citation for each awardee.

The Children to be selected for the award should have shown Exceptional talent. The talent claimed to be possessed by the child as extra-ordinary or exceptional should be justified with supporting documents. Age Certificate should be attached duly attested by a Gazetted Government Officer.

The prescribed application forms for the award 2017 may be obtained from the Deputy Director of Women and Child Development Department in the respective districts. The filled in applications, in English in duplicate may be sent to the concerned District Deputy Director, Women and Child Development Department on or before 30-05-2017.

**Regarding the invitation of applications for Rajiv Gandhi Manav Seva Award for service to children and National Award for Individuals and Institutions in the field of Child Welfare.**

Bengaluru, March 21 (Karnataka Information)

Government of India has instituted an award called Rajiv Gandhi Manav Seva Award for service to children to give recognition to 3 individuals who have made outstanding contribution towards service of Children for over 10 years in the field of Child development, Child protection and Child welfare.

The award comprises cash prize of Rs. 1.00 lakh, silver plaque and a citation for each awardee.

The 3 individuals to be selected for the award should have worked for the cause of children for over 10 years. Paid officers of the Institutions will not be eligible for selection. The sole basis of the selection will be quality of work performed by the individual for the cause of children and its significance for the cause.

On the same lines the Government of India has instituted an award called National Award for Child Welfare to give recognition to individuals and Institutions. National award for child welfare will be given to 3 individuals and 5 institutions who have worked for the welfare of children for some years. Paid officers of the institutions will not be eligible for selection. The award carries a cash prize of Rs. 3.00 lakhs and a citation to each institution and Rs. 1.00 lakh and citation to each individual.

The committee constituted by the Government of Karnataka will select and recommend the names to the above awards to Government of India.

The prescribed applications for the year 2017 may be obtained from the Deputy Director, Department of Women & Child Development in the respective districts. The filled applications in English should be sent to the concerned District Deputy Director, Department of Women & Child Development.

The last date for submission of applications for Rajiv Gandhi Manava Seva award and National Award for Child Welfare is 15th May 2017. The applications received after due date will not be considered for what so ever reason.

## ಮಕ್ಕಳ ಸೇವೆಯಲ್ಲಿ ನಿರತರಾದ ವ್ಯಕ್ತಿಗಳಿಗೆ ನೀಡುವ ರಾಜೀವ್‌ಗಾಂಧಿ ಮಾನವಸೇವಾ ಪ್ರಶಸ್ತಿ ಹಾಗೂ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಹಾಗೂ ಸಂಸ್ಥೆಗಳಿಗೆ ನೀಡುವ ರಾಷ್ಟ್ರ ಪ್ರಶಸ್ತಿಗಾಗಿ ಅರ್ಜಿಗಳ ಆಹ್ವಾನ

**ಬೆಂಗಳೂರು, ಮಾರ್ಚ್ 21 (ಕರ್ನಾಟಕ ವಾರ್ತೆ)**

ಭಾರತ ಸರ್ಕಾರವು ಮಕ್ಕಳ ಅಭಿವೃದ್ಧಿ, ಮಕ್ಕಳ ರಕ್ಷಣೆ ಹಾಗೂ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ 10 ವರ್ಷಕ್ಕಿಂತ ಹೆಚ್ಚಿನ ಸೇವೆಯನ್ನು ಸಲ್ಲಿಸಿರುವಂತಹ ವ್ಯಕ್ತಿಗಳನ್ನು ಗುರುತಿಸಿ ರಾಜೀವ್‌ಗಾಂಧಿ ಮಾನವಸೇವಾ ಪ್ರಶಸ್ತಿಯನ್ನು 3 ವ್ಯಕ್ತಿಗಳಿಗೆ ನೀಡಿ ಗೌರವಿಸುತ್ತದೆ.

ಪ್ರತಿ ವ್ಯಕ್ತಿಗೆ ನೀಡುವ ಪ್ರಶಸ್ತಿಯು ರೂ.1.00 ಲಕ್ಷ ನಗದು ಬಹುಮಾನ, ಬೆಳ್ಳಿ ಫಲಕ ಹಾಗೂ ಪ್ರಶಸ್ತಿ ಪತ್ರವನ್ನು ಒಳಗೊಂಡಿರುತ್ತದೆ.

ಈ ಪ್ರಶಸ್ತಿಗಾಗಿ ಆಯ್ಕೆ ಮಾಡುವ 3 ವ್ಯಕ್ತಿಗಳು ಮಕ್ಕಳ ಶ್ರೇಯೋಭಿವೃದ್ಧಿಗಾಗಿ 10 ವರ್ಷಗಳಿಗೂ ಮೇಲ್ಪಟ್ಟು ಕಾರ್ಯವನ್ನು ನಿರ್ವಹಿಸಿರಬೇಕು. ಸಂಘ-ಸಂಸ್ಥೆಗಳಲ್ಲಿ ವೇತನ ಪಡೆಯುವ ವ್ಯಕ್ತಿಗಳು ಈ ಪ್ರಶಸ್ತಿಗೆ ಅರ್ಹರಿರುವುದಿಲ್ಲ. ಈ ಪ್ರಶಸ್ತಿಗೆ ಆಯ್ಕೆ ಮಾಡಲು ಇರುವ ಒಂದೇ ಮಾನದಂಡ-ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ವ್ಯಕ್ತಿಗಳು ಮಾಡಿರುವ ಕೆಲಸದ ಗುಣಮಟ್ಟದ ಮೇಲೆ ಅವಲಂಬಿತವಾಗಿರುತ್ತದೆ.

ಅದೇ ರೀತಿಯಲ್ಲಿ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಹಲವು ವರ್ಷ ಉತ್ತಮ ಸೇವೆ ಸಲ್ಲಿಸಿದ 3 ವ್ಯಕ್ತಿಗಳು ಹಾಗೂ 5 ಸಂಸ್ಥೆಗಳಿಗೆ ಪ್ರಶಸ್ತಿ ನೀಡುವ ಯೋಜನೆಯನ್ನು ಕೇಂದ್ರ ಸರ್ಕಾರವು ಜಾರಿಗೆ ತಂದಿರುತ್ತದೆ. ಪ್ರತಿ ವ್ಯಕ್ತಿಗೆ ನೀಡುವ ಪ್ರಶಸ್ತಿಯು ರೂ.1.00 ಲಕ್ಷ ನಗದು ಹಾಗೂ ಪ್ರಶಸ್ತಿ ಪತ್ರ ಮತ್ತು ಪ್ರತಿ ಸಂಸ್ಥೆಗೆ ನೀಡುವ ಪ್ರಶಸ್ತಿಯು ರೂ.3.00 ಲಕ್ಷ ನಗದು ಹಾಗೂ ಪ್ರಶಸ್ತಿ ಪತ್ರವನ್ನು ಒಳಗೊಂಡಿರುತ್ತದೆ. ಸಂಘ-ಸಂಸ್ಥೆಗಳಲ್ಲಿ ವೇತನ ಪಡೆಯುವ ವ್ಯಕ್ತಿಗಳು ಈ ಪ್ರಶಸ್ತಿಗೆ ಅರ್ಹರಿರುವುದಿಲ್ಲ. ಈ ಪ್ರಶಸ್ತಿಗೆ ಆಯ್ಕೆ ಮಾಡಲು ಇರುವ ಒಂದೇ ಮಾನದಂಡ-ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ವ್ಯಕ್ತಿಗಳು ಹಾಗೂ ಸಂಸ್ಥೆಗಳು ಮಾಡಿರುವ ಕೆಲಸದ ಗುಣಮಟ್ಟದ ಮೇಲೆ ಅವಲಂಬಿತವಾಗಿರುತ್ತದೆ.

ರಾಜ್ಯ ಸರ್ಕಾರದಿಂದ ರಚಿಸಲ್ಪಟ್ಟಿರುವ ಸಮಿತಿಯು ಪ್ರಶಸ್ತಿಗಳಿಗೆ ಸ್ವೀಕೃತವಾದ ಅರ್ಜಿಗಳನ್ನು ಪರಿಶೀಲಿಸಿ ಅತ್ಯುತ್ತಮ ಸೇವೆ ಸಲ್ಲಿಸಿದ ವ್ಯಕ್ತಿಗಳು ಹಾಗೂ ಸಂಸ್ಥೆಗಳನ್ನು ಆಯ್ಕೆ ಮಾಡಿ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡುತ್ತದೆ.

2017ನೇ ಸಾಲಿಗೆ ರಾಜೀವ್‌ಗಾಂಧಿ ಮಾನವಸೇವಾ ಪ್ರಶಸ್ತಿಗಾಗಿ ಹಾಗೂ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಮತ್ತು ಸಂಸ್ಥೆಗಳಿಗೆ ನೀಡುವ ಪ್ರಶಸ್ತಿಗಾಗಿ ನಿಗದಿಪಡಿಸಿದ ಅರ್ಜಿ ನಮೂನೆಗಳನ್ನು ಆಯಾ ಜಿಲ್ಲಾ ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಕಛೇರಿಯಿಂದ ಪಡೆದು, ಆಂಗ್ಲ ಭಾಷೆಯಲ್ಲಿ ಭರ್ತಿ ಮಾಡಿ ಸಂಬಂಧಪಟ್ಟ ಜಿಲ್ಲಾ ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರಿಗೆ ಸಲ್ಲಿಸತಕ್ಕದ್ದು.

ರಾಜೀವ್‌ಗಾಂಧಿ ಮಾನವಸೇವಾ ಪ್ರಶಸ್ತಿಗಾಗಿ ಮತ್ತು ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಮತ್ತು ಸಂಸ್ಥೆಗಳಿಗೆ ನೀಡುವ ರಾಷ್ಟ್ರ ಪ್ರಶಸ್ತಿಗಾಗಿ ಅರ್ಜಿಗಳನ್ನು ದಿನಾಂಕ:15.05.2017

ರೊಳಗೆ ಸಂಬಂಧಪಟ್ಟ ಉಪ ನಿರ್ದೇಶಕರಿಗೆ ಸಲ್ಲಿಸತಕ್ಕದ್ದು. ನಿಗದಿತ ದಿನಾಂಕದ ನಂತರ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.